ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಒದಗಿಸಿರುವ ಅನುದಾನ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ(ಪದವೀಧರರ ಕ್ಷೇತ್ರ) –

49 (484) ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಜಲಸಂಪನ್ಮೂಲ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ "ಕರ್ನಾಟಕ ನೀರಾವರಿ ನಿಗಮ ನಿಯಮಿತ (ಕ.ನೀ.ನಿ.ನಿ.)"ಕ್ಕೆ ಕಳೆದ 02 ವರ್ಷಗಳಲ್ಲಿ ಎಷ್ಟು ಅನುದಾನ ನೀಡಲಾಗಿದೆ; (ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ;

(ಇ) ಕಳೆದ 02 ವರ್ಷಗಳಿಂದ ಬಾಗಲಕೋಟೆ ಜಿಲ್ಲೆಯ ಬೀಳಗಿ ವಿಧಾನ ಸಭಾ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕರ್ನಾಟಕ ನೀರಾವರಿ ನಿಗಮ ನಿಯಮಿತ ವತಿಯಿಂದ ಅನುಷ್ಠಾನಗೊಳಿಸುವಂತೆ ಎಷ್ಟು ಕಾಮಗಾರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ;

(ಈ) ಅವುಗಳಲ್ಲಿ ಎಷ್ಟು ಕಾಮಗಾರಿಗಳು ಪ್ರಾರಂಭಗೊಂಡಿವೆ ಮತ್ತು ಪ್ರಸ್ತುತ ಯಾವ ಹಂತದಲ್ಲಿವೆ;

(ಉ) ಸದರಿ ಪ್ರಸ್ತಾವನೆಗಳಲ್ಲಿ ಇಲ್ಲಿಯವರೆಗೂ ಅನುಮೋದನೆ ಪಡೆಯದಿರುವ ಕಾಮಗಾರಿಗಳೆಷ್ಟು;

(ಊ) ಅನುಮೋದನೆಗೊಂಡು ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು;

(ಋ) ಯಾವ ಕಾಲಮಿತಿಯಲ್ಲಿ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು?